ಮೈಸೂರಿನಲ್ಲಿರುವ ಖಾಸಗಿ ಬಸ್ ನಿಲ್ದಾಣದ ಬಗ್ಗೆ

1650 - ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ (ಚಾಮರಾಜ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರಿನಲ್ಲಿರುವ ಖಾಸಗಿ ಬಸ್ಸುಗಳ ಸಂಖ್ಯೆ ಎಷ್ಟು?

ಆ) ಇವುಗಳಿಂದ ವಿವಿಧ ರೀತಿಯ ಕರ ಸೇರಿದಂತೆ ಸರ್ಕಾರಕ್ಕೆ ಬರುವ ಆದಾಯವೆಷ್ಟು?

ಇ) ಮೈಸೂರು ನಗರದಲ್ಲಿ ಖಾಸಗಿ ಬಸ್ಸು ನಿಲ್ದಾಣ ಇಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಖಾಸಗಿ ಬಸ್ ನಿಲ್ದಾಣಕ್ಕಾಗಿ ಯಾವ ಸ್ಥಳವನ್ನು ಗುರುತಿಸಲಾಗಿದೆ?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಸಚಿವರು) :

ಅ) 184

ಆ) ಅಂದಾಜು ರೂ.1,12,35,200-00 ವಾರ್ಷಿಕ

ಇ) ಹೌದು

ಈ) ಖಾಸಗಿ ಬಸ್ ನಿಲ್ದಾಣಕ್ಕಾಗಿ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ ಸೇರಿದ ದೊಡ್ಡಕೆರೆ ಮೈದಾನದಲ್ಲಿ 2.00 ಎಕರೆ ವಿಸ್ತೀರ್ಣವನ್ನು ಗುರುತಿಸಲಾಗಿದೆ.

ಯಲಹಂಕ ಉಪನಗರದಲ್ಲಿ ಅನಧಿಕೃತವಾಗಿ ಮನೆಗಳ ನಿರ್ಮಾಣ

1651 - ಶ್ರೀ ವಸಂತ ವಿ. ಸಾಲಿಯಾನ, (ಕಾಪು) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವೆರೆ?

ಅ) ಕರ್ನಾಟಕ ಗೃಹ ಮಂಡಳಿಯಿಂದ ಯಲಹಂಕ ಉಪನಗರದಲ್ಲಿ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ?

ಆ) ಇವುಗಳಲ್ಲಿ ಎಷ್ಟು ಮನೆಗಳು ಹಂಚಿಕೆಯಾಗಿರುತ್ತದೆ?

ಇ) ಇಲ್ಲಿ ಅನಧಿಕೃತವಾಗಿ ಮಂಡಳಿಯ ಜಮೀನನ್ನು ಅತಿಕ್ರಮಿಸಿ ಮನೆ ಕಟ್ಟುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ ಇದನ್ನು ತಡೆಯಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು) :

ಅ) 8173 ಮನೆಗಳು

ಆ) 7784 ಮನೆಗಳು

ಇ) ಹೌದು.

ಈ) ನ್ಯಾಯಾಲಯದಲ್ಲಿ ದಾವೆಯನ್ನು ಹೂಡಲಾಗಿದ್ದು, ಇದು ಬಾಕಿ ಇದೆ.

ಕೃಷಿ ಉತ್ಪನ್ನ ಮಾರುಕಟ್ಟೆ ಯೋಜನೆಯಡಿಯಲ್ಲಿ ರಸ್ತೆಗಳ ಅಭಿವೃದ್ಧಿ

1652 - ಶ್ರೀ ವಸಂತ. ವಿ. ಸಾಲಿಯಾನ (ಕಾಪು) : ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕೃಷಿ ಉತ್ಪನ್ನ ಮಾರುಕಟ್ಟೆ ಯೋಜನೆಯನ್ವಯ 1995-96,, 1996-97 ರಲ್ಲಿ ಎಷ್ಟು ರಸ್ತೆಗಳ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳಲಾಗಿದೆ?

2) ಇವುಗಳಿಗೆ ಬಿಡುಗಡೆ ಮಾಡಿದ ಒಟ್ಟು ಹಣವೆಷ್ಟು?

3) ಮಂಜೂರಾತಿಯಾದ ಎಷ್ಟು ಕಾಮಗಾರಿಗಳನ್ನು ಸಂಪೂರ್ಣಗೊಳಿಸಲಾಗಿದೆ? (ಜಿಲ್ಲಾವಾರು ವಿವರ ನೀಡುವುದು)

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) :

1) 1995-96ರಲ್ಲಿ ಒಟ್ಟಾರೆ 981 ಸಂಪರ್ಕ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿಗಾಗಿ ಕೈಗೆತ್ತಿಕೊಳ್ಳಲಾಗಿದೆ.

1996-97 ರಲ್ಲಿ, ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ರೂ.15.00 ಲಕ್ಷಗಳ ಮೊತ್ತದಂತೆ ರಸ್ತೆಗಳ ಅಭಿವೃದ್ಧಿಯ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗಿದೆ.

2) 1995-96ರಲ್ಲಿ ಸಂಪರ್ಕ ರಸ್ತೆಗಳಿಗಾಗಿ ರೂ.3150 ಲಕ್ಷಗಳು ಬಿಡುಗಡೆ ಮಾಡಲಾಗಿದ್ದು, ಕೈಗೊಂಡಿರುವ 981 ರಸ್ತೆ ಕಾಮಗಾರಿಗಳ ಅಂದಾಜು ವೆಚ್ಚ ರೂ.2988.83 ಲಕ್ಷಗಳಾಗಿರುತ್ತದೆ.

ಹಾಗೂ 1996-97ರಲ್ಲಿ ಪ್ರತಿ ವಿಧಾನಸಭಾಕ್ಷೇತ್ರಕ್ಕೆ ರೂ.15.00 ಲಕ್ಷಗಳನ್ನು ಬಿಡುಗಡೆ ಮಾಡಲು ಸಂಬಂಧ ಸಮಿತಿಗಳಿಗೆ ಸೂಚನೆಗಳನ್ನು ನೀಡಲಾಗಿದೆ.

3) 1995-96ರಲ್ಲಿ ಮಂಜೂರಾಯಾದ 981 ಸಂಪರ್ಕ ರಸ್ತೆ ಕಾಮಗಾರಿಗಳ ಪೈಕಿ 608 ರಸ್ತೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. 1996-97ರಲ್ಲಿ ರಸ್ತೆಗಳ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. (ಜಿಲ್ಲಾವಾರು ವಿವರಗಳನ್ನು ಲಗತ್ತಿಸಲಾಗಿದೆ)